(ಆಃ) ಬೆಂಗಳೂರು ಗ್ರಾಮಾಂತರ ಪ್ರದೇಶದಲ್ಲಿ ಸರ್ಕಾರಿ ಭೂಮಿಯನ್ನು ಖಾಸಗಿ ವ್ಯಕ್ತಿಗಳು ಸ್ವಂತ ಜಮೀನು ಎಂದು ದಾಖಲೆಗಳಲ್ಲಿ ನಮೂದಿಸಿ ವಂಚಿಸಿರುವುದು.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಉಪಾಧ್ಯಕ್ಷರೇ, ನಾನು ಬಹಳ ಪ್ರಮುಖವಾದಂಥ ಮತ್ತು ಗಂಭೀರವಾದಂಥ ವಿಷಯವನ್ನು ಮಾನ್ಯ ಕಂದಾಯ ಮಂತ್ರಿಗಳ ಗಮನಕ್ಕೆ ತಮ್ಮ ಮೂಲಕ ತರುತ್ತಿದ್ದೇನೆ. ಬೆಂಗಳೂರು (ಗ್ರಾಮಾಂತರ) ಮತ್ತು ಬೆಂಗಳೂರು (ನಗರ) ಜಿಲ್ಲೆಗಳಲ್ಲಿ ಸರ್ಕಾರೀ ಭೂಮಿಯನ್ನು ಖಾಸಗಿ ವ್ಯಕ್ತಿಗಳು ತಮ್ಮ ಸ್ವಂತ ಜಮೀನೇ ಎಂದು ಹೇಳಿ ದಾಖಲೆಗಳಲ್ಲಿ ನಮೂದಿಸಿ ಲಕ್ಷಾಂತರ ರೂ.ಗಳ ಬೆಲೆಬಾಳುವ ಕಟ್ಟಡಗಳನ್ನು ನಿರ್ಮಾಣ ಮಾಡಿ ತಮ್ಮ ಸ್ವಂತಕ್ಕೆ ಉಪಯೋಗಿಸಿಕೊಂಡಿದ್ದಾರೆ. ಆ ದಾಖಲೆಗಳನ್ನು ಕೊಟ್ಟಿರುವುದು ರೆವಿನ್ಯೂ ಅಧಿಕಾರಿಗಳು. ಇವರು ಸರ್ಕಾರಿ ಭೂಮಿಯನ್ನು ಖಾಸಗಿಯವರಿಗೆ ಸ್ವಂತ ಭೂಮಿ ಎಂದು ಹೇಳಿ ಬರೆದುಕೊಟ್ಟು, ಆ ದಾಖಲೆಗಳನ್ನು ಕೈಯಲ್ಲಿ ಹಿಡಿದುಕೊಂಡು, ಆ ಜಾಗಗಳಲ್ಲಿ ಲಕ್ಷಾಂತರ -ಕೋಟ್ಯಾಂತರ ರೂ. ಬೆಲೆ ಬಾಳುವ ಕಟ್ಟಡಗಳನ್ನು ಕಟ್ಟಿದ್ದಾರೆ. ಈ ಎರಡು ಜಿಲ್ಲೆಗಳಲ್ಲಿ ಇದೊಂದು ದೊಡ್ಡ ದಂಧೆಯಾಗಿದೆ. ಇದನ್ನು ತಡೆ ಹಿಡಿಯಲಿಕ್ಕೆ ಸರ್ಕಾರ ಕ್ರಮ ತೆಗೆದುಕೊಳ್ಳುತ್ತಿಲ್ಲ. ಇದರಿಂದಾಗಿ ಬೆಂಗಳೂರು (ಗ್ರಾಮಾಂತರ) ಮತ್ತು ಬೆಂಗಳೂರು (ನಗರ) ಈ ಎರಡೂ ಜಿಲ್ಲೆಗಳಲ್ಲಿ ಈ ರೀತಿಯಾಗಿ ಸರ್ಕಾರಿ ಭೂಮಿಯನ್ನು ಕಬಳಿಸಿರತಕ್ಕದ್ದರ ಮೌಲ್ಯ ಸ್ವಲ್ಪ ಹೆಚ್ಚು ಕಡಿಮೆ ಲೆಕ್ಕ ಹಾಕಿದರೆ 50 ಸಾವಿರ ಕೋಟಿ ರೂ.ಗಳಷ್ಟು ಬೆಲೆ ಬಾಳತಕ್ಕಂಥ ಸರ್ಕಾರಿ ಭೂಮಿಯನ್ನು ಖಾಸಗಿ ವ್ಯಕ್ತಿಗಳು ನುಂಗಿದ್ದಾರೆ. ಆದುದರಿಂದ ಸನ್ಮಾನ್ಯ ಉಪಾಧ್ಯಕ್ಷರೇ, ನಾನು ತಮ್ಮ ಮೂಲಕ ಸರ್ಕಾರಕ್ಕೆ ವಿನಂತಿ ಮಾಡಿಕೊಳ್ಳುತ್ತಿದ್ದೇನೆ. ಯಾರ್ಯಾರು ಖಾಸಗಿ ವ್ಯಕ್ತಿಗಳು ಸರ್ಕಾರಿ ಭೂಮಿಯನ್ನು ಸುಳ್ಳು ದಾಖಲೆ ಸೃಷ್ಟಿಸಿ ತಮ್ಮ ಸ್ವಾಧೀನಕ್ಕೆ ತೆಗೆದುಕೊಂಡಿದ್ದಾರೋ, ಆ ಆಸ್ತಿಗಳನ್ನೆಲ್ಲಾ ಸರ್ಕಾರ ಮುಟ್ಟುಗೋಲು ಹಾಕಿಕೊಂಡು ಅವರುಗಳ ಮೇಲೆ ಕ್ರಿಮಿನಲ್ ಮೊಕದ್ದಮೆ ಹೂಡಬೇಕು. ಯಾವ ರೆವಿನ್ಯೂ ಅಧಿಕಾರಿಗಳು ದಾಖಲೆಗಳನ್ನು ತಿದ್ದುವುದರಲ್ಲಿ ತಮ್ಮ ಕೈ ಚಳಕ ತೋರಿಸಿದ್ದಾರೆಯೇ ಅವರನ್ನು ತಕ್ಷಣ ಬಂಧಿಸಿ ಅವರ ಮೇಲೆ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಬೇಕೆಂದು ನಾನು ತಮ್ಮ ಮುಖಾಂತರ ಸರ್ಕಾರವನ್ನು ಒತ್ತಾಯಿಸುತ್ತಿದ್ದೇನೆ. ಇದಕ್ಕೆ ಸಮರ್ಪಕವಾದಂತಹ ಉತ್ತರವನ್ನು ಸದನದಲ್ಲಿ ಹಾಜರಿರುವ ಮಾನ್ಯ ಕಂದಾಯ ಮಂತ್ರಿಗಳು ಹೇಳಬೇಕೆಂದು ಕೋರುತ್ತೇನೆ.

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು) : ಮಾನ್ಯ ಉಪಾಧ್ಯಕ್ಷರೇ, ತಾವು ಅಪ್ಪಣೆ ಕೊಡುವುದಾದರೆ, ನಾಳೆ ಸದನ ಮುಗಿಯುವುದರೊಳಗಾಗಿ ಈ ಬಗ್ಗೆ ಸರ್ಕಾರದ ವತಿಯಿಂದ ಒಂದು ಸ್ಟೇಟ್‌ಮೆಂಟ್ ನೀಡಲು ನಾನು ಪ್ರಯತ್ನ ಮಾಡುತ್ತೇನೆ. ಮಾನ್ಯ ಸದಸ್ಯರು ಪ್ರಸ್ತಾಪಿಸಿದಂತಹ ವಿಚಾರಗಳು ಸರ್ಕಾರದ ಗಮನಕ್ಕೆ ಬಂದಿವೆ. ಈ ಬಗ್ಗೆ ಒಂದು ಸವಿಸ್ತಾರವಾದಂತಹ ಸ್ಟೇಟಮೆಂಟ ಅನ್ನು ನಾನು ನಾಳೆ ಸದನದಲ್ಲಿ ಮಾಡುತ್ತೇನೆ.

(ಮುಂದಲ)